# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**
1) ದಿನಾಂಕ: 12-07-2013ರ ಪರಿಷ್ಕೃತ ಆಯವ್ಯಯ.
2) ಸರ್ಕಾರಿ ಆದೇಶ ಸಂಖ್ಯೆ: ಕೃಇ 15 ಕೃವಿರಾ 2013, ದಿನಾಂಕ: 26-06-2013.
3) ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರ ದಿನಾಂಕ: 22-07-2013ರ ಪತ್ರ ಸಂಖ್ಯೆ: ಕುಪ/ ಕೃವಿವಿರಾ/1719/2013-14.

**** *** ****

**ಪ್ರಸ್ತಾವನೆ:-**

2013-14ನೇ ಸಾಲಿನ ಆಯವ್ಯಯದಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನ ರೂ. 3500.00 ಲಕ್ಷಗಳನ್ನು ನಿಗದಿಪಡಿಸಿದ್ದು, ಅದರಂತೆ ಮೇಲೆ (2)ರಲ್ಲಿ ಓದಲಾದ ದಿನಾಂಕ: 26-06-2013ರ ಆದೇಶದಲ್ಲಿ ಯೋಜನೇತರ ವೆಚ್ಚಕ್ಕಾಗಿ ರೂ. 875.00 ಲಕ್ಷಗಳನ್ನು (ರೂ. ಎಂಟು ನೂರ ಎಪ್ಪತ್ತೈದು ಲಕ್ಷಗಳು ಮಾತ್ರ) ಬಿಡುಗಡೆ ಮಾಡಲಾಗಿದೆ.

ದಿನಾಂಕ: 12-07-2013ರಂದು ಮಾನ್ಯ ಮುಖ್ಯ ಮಂತ್ರಿಯವರು 2013-14ನೇ ಸಾಲಿಗೆ ಹೊಸ ಆಯವ್ಯಯ ಭಾಷಣವನ್ನು ಮಂಡಿಸಿರುತ್ತಾರೆ. ಅದರಂತೆ ಮೇಲೆ ಓದಲಾದ-1ರಲ್ಲಿ, ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನವನ್ನು ಪರಿಷ್ಕರಿಸಿ ರೂ. 2879.00 ಲಕ್ಷಗಳನ್ನು ನಿಗಧಿಪಡಿಸಿದೆ.

ವಿಶ್ವವಿದ್ಯಾಲಯದ ನೌಕರರಿಗೆ ವೇತನ ಹಾಗೂ ವೇತನ ಸಂಬಂಧಿ, ಪಿಂಚಣಿ ಅಂಶದಾನ ಹಾಗೂ ಇತರ ಸಾದಿಲ್ವಾರು ವೆಚ್ಚಗಳಿಗಾಗಿ ಪ್ರತಿ ತಿಂಗಳು ಕನಿಷ್ಟ ರೂ. 936.52 ಲಕ್ಷಗಳ ಅವಶ್ಯಕತೆ ಇರುತ್ತದೆ. ಈ ಮೊದಲು ಬಿಡುಗಡೆ ಮಾಡಿದ ತ್ರೈಮಾಸಿಕ ಅನುದಾನ ರೂ. 875.00 ಲಕ್ಷಗಳ ಜೊತೆಗೆ ಹೆಚ್ಚುವರಿಯಾಗಿ ರೂ. 61.52 ಲಕ್ಷಗಳನ್ನು ಭರಿಸಲಾಗಿರುತ್ತದೆ. ಮುಂದುವರೆದು ಪ್ರತಿ ತಿಂಗಳು ಯೋಜನೇತರದಲ್ಲಿ 316.80 ಲಕ್ಷಗಳು ಬೇಕಾಗುತ್ತವೆ. ಆದಕಾರಣ ರೂ. 1011.92 ಲಕ್ಷಗಳನ್ನು 2ನೇ ತ್ರೈಮಾಸಿಕ ಅನುದಾನವನ್ನಾಗಿ ಬಿಡುಗಡೆ ಮಾಡುವಂತೆ ಮೇಲೆ(3)ರಲ್ಲಿ ಓದಲಾದ ದಿನಾಂಕ: 22-07-2013ರ ಪತ್ರದಲ್ಲಿ ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು ರವರು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಯೋಜನೆ ಅನುದಾನವನ್ನು ಯೋಜನೇತರಕ್ಕೆ ಬಳಸಲು ಅವಕಾಶವಿರುವುದಿಲ್ಲವೆಂದು ಸ್ಪಷ್ಟಪಡಿಸಿ, ಕೃಷಿ ವಿಶ್ವವಿದ್ಯಾಲಯ ರಾಯಚೂರಿಗೆ 2013-14ನೇ ಸಾಲಿಗೆ ನಿಗದಿಯಾಗಿರುವ ಯೋಜನೇತರ ಅನುದಾನ ರೂ. 2879.00 ಲಕ್ಷಗಳಲ್ಲಿ ಪ್ರತಿ ತ್ರೈಮಾಸಿಕ ಅವಧಿಗೆ 25%ರಷ್ಟು ಅನುದಾನ ರೂ. 719.75 ಲಕ್ಷಗಳನ್ನು ಬಿಡುಗಡೆ ಮಾಡಬೇಕಿದ್ದು, ಆದರೆ ಈ ಹಿಂದೆ ಬಿಡುಗಡೆ ಮಾಡಲಾದ ಪ್ರಥಮ ತ್ರೈಮಾಸಿಕ ಕಂತಿನ ಅನುದಾನವನ್ನು ಹೆಚ್ಚಿಗೆ ನೀಡಿರುವುದರಿಂದ ರೂ. 875.00ಗಳಲ್ಲಿ ರೂ. 155.25 ಲಕ್ಷಗಳನ್ನು ಹೊಂದಾಣಿಕೆ ಮಾಡಿ ಉಳಿದಂತೆ ರೂ. 564.50 ಲಕ್ಷಗಳನ್ನು ಬಿಡುಗಡೆ ಮಾಡಲು ಆಂತರಿಕ ಆರ್ಥಿಕ ಸಲಹೆಗಾರರು ಸಹಮತಿಸಿದ್ದಾರೆ. ಅದರಂತೆ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಕೃಇ 15 ಕೃವಿರಾ 2013, ಬೆಂಗಳೂರು, ದಿನಾಂಕ: 30-08-2013**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ರೂ. 564.50 ಲಕ್ಷಗಳನ್ನು (ರೂ. ಐದು ನೂರಾ ಅರವತ್ತಾ ನಾಲ್ಕು ಲಕ್ಷ ಐವತ್ತು ಸಾವಿರಗಳು ಮಾತ್ರ) ಲೆಕ್ಕ ಶೀರ್ಷಿಕೆ-2415-80-004-3-00-101ರಡಿ 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.

...3

- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 29-08-2013ರ ಟಿಪ್ಪಣಿ ಸಂಖ್ಯೆ: ಕೃಇ 152 ಅಂಆಸ 2013ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಜೆ.ಆರ್. ವಿಶ್ವನಾಥಾಚಾರ್)**
ಜೆ.ಆರ್. ವಿಶ್ವನಾಥಾಚಾರ್
**ಸರ್ಕಾರದ ಅಧೀನ ಕಾರ್ಯದರ್ಶಿ**
ಸರ್ಕಾರದ ಅಧೀನ ಕಾರ್ಯದರ್ಶಿ
**ಕೃಷಿ ಇಲಾಖೆ (ಯೋಜನೆ)**
ಕೃಷಿ ಇಲಾಖೆ (ಯೋಜನೆ)
**(ದೂರವಾಣಿ ಸಂಖ್ಯೆ: 080 2203 2388)**

**<u>ಇವರಿಗೆ</u>:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**<u>ಪ್ರತಿ</u>:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
5. ಕುಲಸಚಿವರು/ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ರಾಯಚೂರು.
6. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ರಾಯಚೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.